ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಸಂಡೂರು.

**OS. No. 139/ 2021** **P.W. 01**

ದಿನಾಂಕ 15-02-2023 ರಂದು ಪ್ರಮಾಣ ವಚನ ಮಾಡಿಸಲಾಯಿತು.

**ಪಾಟೀ ಸವಾಲು ಶ್ರೀ ಎಂ ಬಿ ಹೆಚ್ ವಕೀಲರಿಂದ**

* * * *

ಪ್ರತಿವಾದಿಯು ತನ್ನ ಜಮೀನಿನಲ್ಲಿ ಮನೆ ಕಟ್ಟಿರುವ ಕಾರಣ ನಾನು ಈ ದಾವೆಯನ್ನು ಹೂಡಿರುತ್ತೇನೆ ಆದರೆ ಪ್ರತಿಯೊಬ್ಬ ಪ್ರತಿವಾದಿ ಎಷ್ಟು ವಿಸ್ತೀರ್ಣದಲ್ಲಿ ಮನೆಯನ್ನು ಕಟ್ಟಿಕೊಂಡಿರುತ್ತಾರೆ ಎಂದು ನನಗೆ ನಿಖರವಾಗಿ ಹೇಳಲಾಗುವುದಿಲ್ಲ. ದಾವಾ ಸ್ವತ್ತಿನ ಸರ್ವೆ ನಂಬರ 26/ಬಿ ವಿಸ್ತೀರ್ಣ 1 ಎಕರೆ 9 ಸೆಂಟ್ಸ ಇರುತ್ತದೆ. ಸದರಿ ಆಸ್ತಿಯನ್ನು ಈರಾಳ ಬಸಣ್ಣ ಅವರಿಂದ ಸುಮಾರು 6 ವರ್ಷಗಳ ಹಿಂದೆ ಖರೀದಿ ಮಾಡಿರುತ್ತೇನೆ. ನಾನು ದಾವಾ ಸ್ವತ್ತಿನ ವಿಸ್ತೀರ್ಣವನ್ನು ಸುಳ್ಳು ಹೇಳುತ್ತಿದ್ದೆನೆ ಎಂದರೆ ಸರಿಯಲ್ಲ. ನಾನು ಈ ದಾವೆಯನ್ನು ಸರ್ವೆ ನಂಬರ 26/2 1 ಎಕರೆ 74 ಸೆಂಟ್ಸ ಗೆ ಸಂಬಂಧಿಸಿದಂತೆ ಹಾಕಿರುತ್ತೇನೆ ಎಂದರೆ ಸರಿ. ದಾವಾ ಸ್ವತ್ತಿನ ದಕ್ಷಿಣ ದಿಕ್ಕಿಗೆ ಆಶ್ರಯ ಮನೆಗಳು ಇರುತ್ತವೆ ಎಂದರೆ ಸರಿ. ಪ್ರತಿವಾದಿಗಳು ಆಶ್ರಯ ಮನೆಗೆ ನೀಡಿರುವ ಜಾಗದಲ್ಲಿ ಸರ್ವೆ ನಂಬರ 26/1 ರಲ್ಲಿ ಮನೆಗಳನ್ನು ಕಟ್ಟಿಕೊಂಡಿರುತ್ತಾರೆ ಎಂದರೆ ಸಾಕ್ಷಿಯು ಸದರಿ ಸರ್ವೆ ನಂಬರ 26/1 ರಲ್ಲಿ ಮತ್ತು ತಮ್ಮ ಸ್ವತ್ತಿನಲ್ಲಿ ಕಟ್ಟಿಕೊಂಡಿರುತ್ತಾರೆ ಎಂದು ಹೇಳಿರುತ್ತಾರೆ. ನ್ಯಾಯಾಲಯಕ್ಕೆ ದಾವಾ ಸ್ವತ್ತಿನಲ್ಲಿ ಮನೆಗಳನ್ನು ಕಟ್ಟಿಕೊಂಡಿರುವ ಬಗ್ಗೆ ಯಾವುದೆ ಫೋಟೊಗಳನ್ನು ಹಾಜರುಪಡಿಸಿರುವುದಿಲ್ಲ. ದಾವಾ ಸ್ವತ್ತಿನಲ್ಲಿ ಪ್ರತಿವಾದಿಗಳು ಮನೆಯನ್ನು ಕಟ್ಟಿಕೊಂಡಿರುವ ಬಗ್ಗೆ ನ್ಯಾಯಾಲಯಕ್ಕೆ ಯಾವುದೆ ಸ್ಕೆಚನ್ನು ಹಾಜರುಪಡಿಸಿರುವುದಿಲ್ಲ. ಸರ್ವೆ ನಂಬರ 26/1 ರಲ್ಲಿ ಆಶ್ರಯ ಮನೆಗಳಿಗೆ ನೀಡಿರುವ ಜಮೀನು ಮತ್ತು ಅದಕ್ಕೆ ಪಟ್ಟವನ್ನು ನೀಡಿರುತ್ತಾರೆ ಎಂದರೆ ಸರಿ. ಪ್ರತಿವಾದಿಗಳು ದಾವಾ ಸ್ವತ್ತಿನಲ್ಲಿ ಯಾವುದೆ ಮನೆಗಳನ್ನು ಕಟ್ಟಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ.

ಪಾಟೀ ಸವಾಲಿಗೆ ಸಮಯಾವಕಾಶವನ್ನು ಕೋರಿದ್ದು ಅನುಮತಿಸಿ ಸಮಯಾವಕಾಶವನ್ನು ನೀಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇದೆ.

ಪ್ರ.ದ.ನ್ಯಾ.ದಂ., ಸಂಡೂರು.